# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – 560 002.

ಸಂಖ್ಯೆ: BBMP/Addl.Dir/JD NORTH/0132/2015-16 ದಿನಾಂಕ: 28-06-2017

GC/14/2017-18
ದಿನಾಂಕ. 28/06/2017

ಜಂಟಿ ನಿರ್ದೇಶಕರು (ನಗರ ಯೋಜನೆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಬೆಂಗಳೂರು

## ಪ್ರಾರಂಭಿಕ ಪ್ರಮಾಣಪತ್ರ (ಭಾಗಶಃ)

ವಿಷಯ: ಆಸ್ತಿ ಸಂಖ್ಯೆ: 202/78, ವಾರ್ಡ್ ನಂ. 06, ಥಣಿಸಂದ್ರ, ಯಲಹಂಕ ವಲಯ, ಬೆಂಗಳೂರು. ಇಲ್ಲಿರುವ ಸ್ವತ್ತಿನಲ್ಲಿ ನಿರ್ಮಿಸುತ್ತಿರುವ ಬ್ಲಾಕ್ – ಎ ರಲ್ಲಿನ ವಿಂಗ್ – 1 & 2 ಮತ್ತು ಬ್ಲಾಕ್ – ಬಿ ರಲ್ಲಿನ ವಿಂಗ್ – 1 & 2 ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಬಗ್ಗೆ.

ಉಲ್ಲೇಖ: 1) ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir/JDNORTH/0132/2015-16 ದಿನಾಂಕ: 22-02-2016

2) ತಮ್ಮ ಮನವಿ ಪತ್ರ ದಿನಾಂಕ: 05-06-2017

* * * * * * *

ಆಸ್ತಿ ಸಂಖ್ಯೆ. 202/78, ವಾರ್ಡ್ ನಂ. 06, ಥಣಿಸಂದ್ರ, ಯಲಹಂಕ ವಲಯ, ಬೆಂಗಳೂರು ಇಲ್ಲಿರುವ ಸ್ವತ್ತಿನಲ್ಲಿ ಸಾಮಾನ್ಯ ಎರಡು ತಳಮಹಡಿಯನ್ನೊಳಗೊಂಡಂತೆ ಬ್ಲಾಕ್ – ಎ ರಲ್ಲಿನ ನೆಲ + ಮೇಲಿನ 13 ಅಂತಸ್ತುಗಳ ವಿಂಗ್ – 1 & 2 ಮತ್ತು ಬ್ಲಾಕ್ – ಬಿ ರಲ್ಲಿನ ನೆಲ + ಮೇಲಿನ 13 ಅಂತಸ್ತುಗಳ ವಿಂಗ್ – 1 & 2 ಹಾಗೂ ನೆಲ + ಮೇಲಿನ 5 ಅಂತಸ್ತುಗಳ ವಿಂಗ್ – 3 ಇವುಗಳಲ್ಲಿ ಒಟ್ಟು 364 ಘಟಕಗಳುಳ್ಳ ವಸತಿ ಸಮುಚ್ಚಯ ಕಟ್ಟಡಗಳಿಗೆ ಹಾಗೂ ಬ್ಲಾಕ್ – ಎ ಮತ್ತು ಬಿ ಗೆ ಹೊಂದಿಕೊಂಡಂತೆ ನೆಲ + ಮೇಲಿನ 1 ಅಂತಸ್ತಿನ ಕ್ಲಬ್‌ಹೌಸ್ ಕಟ್ಟಡ ನಿರ್ಮಿಸಲು ಉಲ್ಲೇಖ (1) ರಂತೆ ದಿನಾಂಕ: 22-02-2016 ರಂದು ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ. ಪ್ರಸ್ತುತ ಸದರಿ ಬಿಲ್ಡಿಂಗ್ – 1 ರಲ್ಲಿ ಬ್ಲಾಕ್ – ಎ ರಲ್ಲಿನ ವಿಂಗ್ – 1 & 2 ಮತ್ತು ಬ್ಲಾಕ್ – ಬಿ ರಲ್ಲಿನ ವಿಂಗ್ – 1 & 2 ರ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಉಲ್ಲೇಖ (2) ರಲ್ಲಿ ಕೋರಿರುವುದಕ್ಕೆ ಸಂಬಂಧಿಸಿದಂತೆ ಕಟ್ಟಡ ನಿರ್ಮಾಣದ ಸ್ಥಳವನ್ನು ಪರಿಶೀಲಿಸಲಾಗಿ, ಮಂಜೂರಾತಿ ನಕ್ಷೆಯನ್ವಯ ಕಟ್ಟಡ ನಿರ್ಮಾಣ ಪ್ರಾರಂಭಿಸಿದ್ದು, ಆರ್.ಸಿ.ಸಿ. ಸ್ಥಂಭಗಳನ್ನು ನಿರ್ಮಿಸಲಾಗಿರುತ್ತದೆ.

ಅಪರ ನಿರ್ದೇಶಕರು (ನಗರ ಯೋಜನೆ) ರವರು ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 14-06-2017 ರಂದು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರದ ಬಾಬ್ತು ಶುಲ್ಕ ಒಟ್ಟು ರೂ. 9,57,000/-ಗಳಿಗೆ ಡಿ.ಡಿಯನ್ನು ಸಲ್ಲಿಸಿ ಈ ಕಛೇರಿಯ ರಶೀದಿ ಸಂಖ್ಯೆ: RE-ifms331-TP/000196 ದಿನಾಂಕ: 24-06-2017 ರಂದು ಸಂದಾಯ ಮಾಡಿರುವುದರಿಂದ, ಸದರಿ ಬ್ಲಾಕ್ – ಎ ರಲ್ಲಿನ ವಿಂಗ್ – 1 & 2 ಮತ್ತು ಬ್ಲಾಕ್ – ಬಿ ರಲ್ಲಿನ ವಿಂಗ್ – 1 & 2 ವಸತಿ ಸಮುಚ್ಚಯ ಕಟ್ಟಡಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರ (ಭಾಗಶಃ) ವನ್ನು ನೀಡಲಾಗಿದೆ.

1. ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2. ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.
3. ನಕ್ಷೆ ಮಂಜೂರಾತಿಯ ಸಿಂಧುತ್ವವು ಉಲ್ಲೇಖ (1) ರಂತೆ ಅನುಮೋದನೆ ನೀಡಿದ ದಿನಾಂಕದಿಂದ 5 ವರ್ಷಗಳ ಅವಧಿಗೆ ಮಾನ್ಯತೆ ಹೊಂದಿದ್ದು, ಈ ಅವಧಿಯೊಳಗೆ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.
4. ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ-ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.

Scanned by CamScanner

5. ನಿರ್ಮಾಣ ಪ್ರಾರಂಭಿಸಲು ಬಾಕಿ ಇರುವ ಬ್ಲಾಕ್ – ಬಿ, ವಿಂಗ್ – 3 ರ ನಿರ್ಮಾಣ ಕಾರ್ಯವನ್ನು ಮಂಜೂರಾದ ನಕ್ಷೆಯಂತೆ ಕೈಗೊಂಡು ಸದರಿ ಕಟ್ಟಡದ ಭಾಗಕ್ಕೆ ಪ್ರಾರಂಭಿಕ ಪ್ರಮಾಣಪತ್ರ ಪಡೆಯತಕ್ಕದ್ದು.

6. ಉದ್ಯಾನವನ ಹಾಗೂ ಬಯಲು ಜಾಗದ ಶುಲ್ಕವನ್ನು ಪಾವತಿಸುವ ಸಂಬಂಧ ಘನ ಸರ್ವೋಚ್ಚ ನ್ಯಾಯಾಲಯ ಹಾಗೂ ಉಚ್ಚ ನ್ಯಾಯಾಲಯದ ಅಂತಿಮ ಆದೇಶಕ್ಕಾಗಿ ಬದ್ಧರಿರುವುದಾಗಿ ದಿನಾಂಕ: 23–06–2017 ರಂದು ಸಲ್ಲಿಸಿರುವ ಮುಚ್ಚಳಿಕೆ ಪತ್ರದಲ್ಲಿನ ಅಂಶಗಳಿಗೆ ಬದ್ಧರಿರತಕ್ಕದ್ದು.

28/06/17

ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

28/6 28/6/17 28/6/17

ಗೆ,

ಮೆ: ಸಾಯಿ ಕಲ್ಯಾಣ್ ಬಿಲ್ಡರ್ಸ್ ಅಂಡ್ ಡೆವಲಪರ್ಸ್ ಜಿ.ಪಿ.ಎ.ದಾರರು,
ಶ್ರೀ ಎರ್ರಘಂಟಲ ಕಲ್ಯಾಣ ಚಕ್ರವರ್ತಿ, ವ್ಯವಸ್ಥಾಪಕ ನಿರ್ದೇಶಕರು
ಶ್ರೀಮತಿ ತಹಸೀನ್ ಆರಾ, ಖಾತಾದಾರರು ರವರ ಪರವಾಗಿ,
2ನೇ ಮಹಡಿ, #3, ಹೆರಿಟೇಜ್ ಫುಡ್ ಮೇಲ್,
ಕಾಫಿಬೋರ್ಡ್ ಲೇಔಟ್ ಪಾರ್ಕ್ ಎದುರು,
ಕೆಂಪಾಪುರ, ಹೆಬ್ಬಾಳ, ಬೆಂಗಳೂರು – 560 024.

Scanned by CamScanner